**ಆಕಾಶವಾಣಿ**
**ಪ್ರದೇಶ ಸಮಾಚಾರ**
**ಓದುತ್ತಿರುವವರು ರವಿ ಕುಲಕರ್ಣಿ 10-12-25**

## ಮುಖ್ಯಾಂಶಗಳು

**ವಿಶ್ವ ಕ್ವಾಂಟಮ್** ಭೂಪಟದಲ್ಲಿ ಬೆಂಗಳೂರು: ಆರ್ಥಿಕ ನೆರವು ಕೋರಿ ಪ್ರಧಾನಿಗೆ ಮುಖ್ಯಮಂತ್ರಿ ಪತ್ರ.

**ರಾಜ್ಯದಲ್ಲಿ ಮೂರು ತಿಂಗಳ ಒಳಗಾಗಿ** ಖಾಲಿ ಇರುವ ಸ್ಥಳಗಳಲ್ಲಿ ಪಿಎಸ್‌ಐ ಹುದ್ದೆಗಳ ಭರ್ತಿ– ಗೃಹ ಸಚಿವರಿಂದ ವಿಧಾನಸಭೆಗೆ ಮಾಹಿತಿ.

**ಘಟಪ್ರಭಾ ಬಲದಂಡೆ ಮುಖ್ಯ** ಕಾಲುವೆಯಿಂದ 1,35,381 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ– ಉಪಮುಖ್ಯಮಂತ್ರಿ ಹೇಳಿಕೆ.

**ಹೊಸ ಕೈಗಾರಿಕಾ** ನೀತಿ ಮೂಲಕ ರಾಜ್ಯದ ಹಿಂದುಳಿದ ಪ್ರದೇಶಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ– ಕೈಗಾರಿಕಾ ಸಚಿವರ ಭರವಸೆ.

## ಈಗ ವಾರ್ತೆಗಳ ವಿವರ

*******

**ಭಾರತದ ತಂತ್ರಜ್ಞಾನ ರಾಜಧಾನಿ** ಬೆಂಗಳೂರಿನಲ್ಲಿ 'ಕ್ವಾಂಟಮ್ ಮೆಟೀರಿಯಲ್ಸ್ ಇನ್ನೋವೇಶನ್ ನೆಟ್‌ವರ್ಕ್' ಸ್ಥಾಪಿಸಲು 150 ಕೋಟಿ ಆರ್ಥಿಕ ನೆರವು ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ರಾಷ್ಟ್ರೀಯ ಕ್ವಾಂಟಮ್ ಮಿ ’ನ್ ಅಡಿ ಆರ್ಥಿಕ ನೆರವು ಕೋರಿರುವ ಮುಖ್ಯಮಂತ್ರಿ, ಪತ್ರದಲ್ಲಿ ಯೋಜನೆಯ ಮಹತ್ವ ವಿವರಿಸಿದ್ದಾರೆ. ವಸ್ತುಗಳ ಸಂಶೋಧನೆ ಮತ್ತು ತಂತ್ರಜ್ಞಾನ ಅಭಿವೃದ್ಧಿ ಒಂದೇ ಕಡೆ ನಡೆಯುವಂತಹ ಸ್ವಾವಲಂಬಿ ಮತ್ತು ಸುಸ್ಥಿರ ಆವಿ ್ಕರದ ಪರಿಸರ ನಿರ್ಮಿಸುವುದು ಯೋಜನೆಯ ಗುರಿ. ಪ್ರಸ್ತಾವಿತ ಕ್ಯು–ಮಿಂಟ್ ಕೇವಲ ರಾಜ್ಯಕ್ಕ ್ಟೇ ಅಲ್ಲದೆ, ಇಡೀ ದೇಶದ ಕ್ವಾಂಟಮ್ ಸಂಶೋಧನೆ ಮತ್ತು ಉದ್ಯಮದ ಅಗತ್ಯಗಳನ್ನು ಪೂರೈಸುವ ರಾಷ್ಟ್ರೀಯ ಸಂಪನ್ಮೂಲವಾಗಿ ಕಾರ್ಯನಿರ್ವಹಿಸಲಿದೆ ಎಂದು ಪ್ರತಿಪಾದಿಸಿದ್ದಾರೆ. ಈ ಯೋಜನೆಯು ಸ್ಥಳೀಯ ಮೂಲಸೌಕರ್ಯ ಅಭಿವೃದ್ಧಿ, ಕೌಶಲ್ಯಾಭಿವೃದ್ಧಿ ಹಾಗೂ

ಅಂತರರಾಷ್ಟ್ರೀಯ ಸಹಯೋಗಕ್ಕೆ ಒತ್ತು ನೀಡಲಿದ್ದು, ಈ ನಿಟ್ಟಿನಲ್ಲಿ ಕೇಂದ್ರದೊಂದಿಗೆ ನಿಕಟವಾಗಿ ಕೆಲಸ ಮಾಡಲು ರಾಜ್ಯ ಸರ್ಕಾರ ಸನ್ನದ್ಧವಾಗಿದೆ ಎಂದು ಮುಖ್ಯಮಂತ್ರಿ ಪತ್ರದಲ್ಲಿ ತಿಳಿಸದ್ದಾರೆ.

*******

**ಘಟಪ್ರಭಾ ಬಲದಂಡೆ ಮುಖ್ಯ** ಕಾಲುವೆಯಿಂದ ಒಟ್ಟಾರೆ 1 ಲಕ್ಷ 35 ಸಾವಿರದ 381 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಬಲದಂಡೆ ಕಾಲುವೆ ದುರಸ್ತಿ ಹಾಗೂ ಚಿಕ್ಕೋಡಿ ಶಾಖಾ ಕಾಲುವೆ ಆಧುನೀಕರಣ ಕಾಮಗಾರಿಗೆ 1,722 ಕೋಟಿ ವೆಚ್ಚದಲ್ಲಿ ವಿಸ್ತೃತ ಯೋಜನಾ ವರದಿ ರೂಪಿಸಲಾಗಿದ್ದು, ವರದಿಯನ್ನು ಕೇಂದ್ರ ಸರ್ಕಾರದ ಜಲಶಕ್ತಿ ಮಂತ್ರಾಲಯದ ಕೇಂದ್ರ ಜಲ ಆಯೋಗದ ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು. ಪ್ರಸ್ತಾವನೆ ಪರಿಶೀಲನೆಯಲ್ಲಿದ್ದು, ಅನುಮೋದನೆ ದೊರೆತರೆ ಕೇಂದ್ರ ಹಾಗೂ ರಾಜ್ಯ ಸರ್ಕಾರ 60:40 ಅನುಪಾತದಲ್ಲಿ ಕಾಮಗಾರಿ ಅನು ಷ್ಠಾನಗೊಳಿಸಲಿವೆ ಎಂದು ಡಿ.ಕೆ.ಶಿವಕುಮಾರ ಹೇಳಿದರು.

*******

**ರಾಜ್ಯದಲ್ಲಿ ಮೂರು ತಿಂಗಳ ಒಳಗಾಗಿ** ಖಾಲಿ ಇರುವ ಸ್ಥಳಗಳಲ್ಲಿ ಪಿಎಸ್‌ಐ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, 545 ಪಿ.ಎಸ್.ಐ. ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದ್ದು, ಈಗಾಗಲೆ ಅಭ್ಯರ್ಥಿಗಳ ತರಬೇತಿ ನಡೆಯುತ್ತಿದೆ ಎಂದರು. ಪೊಲೀಸ್ ಕಾನ್ಸ್‌ಟೇಬಲ್‌ಗಳ ನೇಮಕಾತಿಗಾಗಿಯೂ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುಮೋದನೆ ದೊರೆತ ಕೂಡಲೇ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂದು ಡಾ.ಪರಮೇಶ್ವರ ಹೇಳಿದರು.

*******

**ರಾಜ್ಯದ ಹೊಸ ಕೈಗಾರಿಕಾ** ನೀತಿ ರಾಜ್ಯದ ಸಮಗ್ರ ಅಭಿವೃದ್ಧಿ ಗುರಿಯೊಂದಿಗೆ ಬೆಂಗಳೂರಿನಿಂದ ಹೊರಗಡೆ ಹಿಂದುಳಿದ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಉತ್ತೇಜಿಸುವ ಗುರಿ ಹೊಂದಿದೆ ಎಂದು ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ವಿಧಾನ ಪರಿ ‘ತ್‌ನಲ್ಲಿ ಸದಸ್ಯ ಹೆಚ್.ಎಸ್.ಗೋಪಿನಾಥ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದ ಹಿಂದುಳಿದ ತಾಲ್ಲೂಕುಗಳಲ್ಲಿ ಹೂಡಿಕೆ ಪ್ರೋತ್ಸಾಹಿಸುವ ಉದ್ದೇಶದಿಂದ ರಾಜ್ಯದ ಜಿಲ್ಲೆಗಳನ್ನು ಮೂರು ವಲಯಗಳಾಗಿ ವರ್ಗೀಕರಿಸಲಾಗಿದೆ. ಕೈಗಾರಿಕೆಯಲ್ಲಿ ಹಿಂದುಳಿದ ತಾಲ್ಲೂಕು, ಜಿಲ್ಲೆಗಳನ್ನು ವಲಯ–1

ಮತ್ತು ವಲಯ–2 ಹಾಗೂ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳನ್ನು ವಲಯ–3 ರಲ್ಲಿ ವರ್ಗೀಕರಿಸಲಾಗಿದೆ ಎಂದರು. ರಾಜ್ಯದಲ್ಲಿ ಬಂಡವಾಳ ಹೂಡಲು, ದೇಶ ವಿದೇಶಗಳ ಹಲವು ಪ್ರತಿಷ್ಠಿತ ಕಂಪನಿಗಳೊಂದಿಗೆ ಸಭೆಗಳನ್ನು ನಡೆಸಲಾಗುತ್ತಿದೆ. ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

*******

**ಚಾಮರಾಜನಗರ ಜಿಲ್ಲೆ ಪುರಾಣ** ಪ್ರಸಿದ್ಧ ಕ್ಷೇತ್ರ ಬಿಳಿಗಿರಿ ರಂಗನಬೆಟ್ಟ ಪ್ರದೇಶವನ್ನು 5.75 ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸುವ ಕಾರ್ಯ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಪ್ರವಾಸೋದ್ಯಮ ಇಲಾಖೆ ಸಚಿವ ಹೆಚ್.ಕೆ. ಪಾಟೀಲ್ ಹೇಳಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಬಿಳಿಗಿರಿ ರಂಗನಬೆಟ್ಟ ಕ್ಷೇತ್ರವನ್ನು ಪ್ರವಾಸೋದ್ಯಮ ಸ್ಥಳವಾಗಿ ರೂಪುಗೊಳಿಸಲಾಗುತ್ತಿದ್ದು, ಪ್ರವಾಸೋದ್ಯಮ ಇಲಾಖೆಯಿಂದ ಈಗಾಗಲೆ ದೇವಾಲಯದ ಸುತ್ತ 1 ಕೋಟಿ ರೂಪಾಯಿ ವೆಚ್ಚದಲ್ಲಿ ನೆಲಹಾಸು ಕಾಮಗಾರಿ ಪೂರ್ಣಗೊಳಿಸಲಾಗಿದೆ. ಬೆಟ್ಟದಲ್ಲಿ ಸುಸಜ್ಜಿತ ಬಸ್ ನಿಲ್ದಾಣ, ನಂದಿ ಬೆಟ್ಟದಲ್ಲಿನ ಮಾದರಿಯಲ್ಲಿ ವೀಕ್ಷಣಾ ಗೋಪುರಗಳು, ದಾಸೋಹ, ಅಡುಗೆ ಮನೆ ಸೇರಿದಂತೆ ಸಮಗ್ರ ಅಭಿವೃದ್ಧಿಗಾಗಿ 5.75 ಕೋಟಿ ರೂಪಾಯಿ ವೆಚ್ಚದ ವಿವರವಾದ ಪರಿಕಲ್ಪನಾ ವರದಿಗೆ ಅನುಮೋದನೆ ನೀಡಿ, ಅಗತ್ಯ ಅನುದಾನ ನೀಡುವ ಕಾರ್ಯ ಸರ್ಕಾರದ ಪರಿಶೀಲನೆಯಲ್ಲಿದೆ ಎಂದರು.

*******

**ಬೆಳಗಾವಿ ಜಿಲ್ಲೆಯನ್ನು** ವಿಭಜಿಸಿ ಚಿಕ್ಕೋಡಿ ಮತ್ತು ಗೋಕಾಕ್‌ಗಳನ್ನು ನೂತನ ಜಿಲ್ಲೆಗಳನ್ನಾಗಿ ಘೋಷಿಸುವದಕ್ಕೆ ಸಂಬಂಧಪಟ್ಟಂತೆ ಅಭಿಪ್ರಾಯ ಸಂಗ್ರಹಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಸಚಿವರು, ದೊಡ್ಡ ಜಿಲ್ಲೆಗಳನ್ನು ಆಡಳಿತಾತ್ಮಕವಾಗಿ ನಿರ್ವಹಣೆ ಮಾಡುವುದು ಕಷ್ಟ. ಇದರಿಂದಾಗಿ ಜನಪರ ಆಡಳಿತ ಕೊಡುವುದು ಕಷ್ಟಸಾಧ್ಯವೆಂಬುದು ಸರ್ಕಾರದ ಗಮನಕ್ಕೆ ಬಂದಿದೆ. ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಎರಡು ಅಥವಾ ಮೂರು ನೂತನ ಜಿಲ್ಲೆಗಳನ್ನು ರಚಿಸಬೇಕೆಂಬ ಮನವಿಗಳು ಬಂದಿವೆ. ಇದನ್ನು ಸೂಕ್ಷ್ಮವಾಗಿ ನಿರ್ವಹಿಸಬೇಕಿದ್ದು, ಅಭಿಪ್ರಾಯ ಸಂಗ್ರಹಣೆ ಪ್ರಕ್ರಿಯೆ ಆಗಬೇಕಿದೆ. ಸಮಯಾವಕಾಶ ನೋಡಿಕೊಂಡು ಎಲ್ಲರ ಅಭಿಪ್ರಾಯ ಪಡೆದು ಮುಖ್ಯಮಂತ್ರಿ ಅವರೊಂದಿಗೂ ಕೂಡ ಈ ಬಗ್ಗೆ ಚರ್ಚಿಸಿ ಕಾರ್ಯರೂಪಕ್ಕೆ ತರುವ ಕೆಲಸ ಮಾಡಲಾಗುವುದು ಎಂದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**
**ಪ್ರಕಟಣೆ–52 ಸೆಕೆಂಡ್ಸ್**
**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಇಂದು ಮಾನವ** ಹಕ್ಕುಗಳ ದಿನ. ಪ್ರತಿಯೊಬ್ಬರಿಗೂ ವೈಯಕ್ತಿಕ ಘನತೆ, ಸಮಾನತೆ ಮತ್ತು ಸ್ವಾತಂತ್ರ್ಯದ ಭರವಸೆ ನೀಡುವ ದಿನವನ್ನಾಗಿ ಪ್ರತಿ ವರ್ಷ ಡಿಸೆಂಬರ್ 10 ರಂದು ಜಗತ್ತಿನೆಲ್ಲೆಡೆ ಮಾನವ ಹಕ್ಕುಗಳ ದಿನ ಆಚರಿಸಲಾಗುತ್ತದೆ. 'ನಮ್ಮ ದೈನಂದಿನ ಅಗತ್ಯತೆಗಳು' ಈ ವ ರ್ಷದ ಘೋಷ ವಾಕ್ಯ. ಯಾವುದೇ ಧರ್ಮ, ಜಾತಿ, ಲಿಂಗ, ಜನಾಂಗ, ಬಣ್ಣ, ಭಾ ಷೆ, ರಾಜಕೀಯ ಅಥವಾ ಇತರೆ ಅಭಿಪ್ರಾಯಗಳು, ಸ್ಥಾನಮಾನವನ್ನು ಲೆಕ್ಕಿಸದೆ ಎಲ್ಲಾ ಮನುಷ್ಯರು ಸಮಾನರು. ಎಲ್ಲರೂ ಸಂಪೂರ್ಣ ಹಕ್ಕನ್ನು ಹೊಂದಿದ್ದಾರೆ ಎಂಬುದನ್ನು ಸೂಚಿಸುವುದು ಮಾನವ ಹಕ್ಕುಗಳ ಮೂಲ ಉದ್ದೇಶವಾಗಿದೆ. ವ್ಯಕ್ತಿಯ ಜೀವನ, ಸ್ವಾತಂತ್ರ್ಯ, ಸಮಾನತೆ ಮತ್ತು ಘನತೆಗೆ ಸಂಬಂಧಿಸಿದ ಹಕ್ಕುಗಳ ಬಗ್ಗೆ ಈ ದಿನದಂದು ಜನರಲ್ಲಿ ಅರಿವು ಮೂಡಿಸಲಾಗುತ್ತದೆ. ಜೀವಿಸುವುದು, ವಾಕ್ ಸ್ವಾತಂತ್ರ್ಯ, ಆಹಾರ, ಶಿಕ್ಷಣ, ಸಾಮಾಜಿಕ ಭದ್ರತೆ, ಸಂಘಟನೆ, ರಾಷ್ಟ್ರೀಯತೆ, ರಕ್ಷಣೆ, ಆರೋಗ್ಯ, ಧಾರ್ಮಿಕ ಸ್ವಾತಂತ್ರ್ಯದ ಜತೆಗೆ ದೌರ್ಜನ್ಯದ ವಿರುದ್ಧ ಧ್ವನಿ ಎತ್ತುವ ಹಕ್ಕುಗಳು ಮಾನವ ಹಕ್ಕುಗಳ ವ್ಯಾಪ್ತಿಯಲ್ಲಿ ಬರುತ್ತವೆ.

*******

**ದೀರ್ಘಕಾಲದವರೆಗೆ ಪಾವತಿಯಾಗದೆ** ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಮತ್ತು ಷೇರುಗಳನ್ನು ಅವುಗಳ ಮಾಲೀಕರು ಅಥವಾ ಕಾನೂನುಬದ್ಧ ವಾರಸುದಾರರಿಗೆ ಹಸ್ತಾಂತರಿಸುವ 'ನಿಮ್ಮ ಹಣ, ನಿಮ್ಮ ಹಕ್ಕು' ಶಿಬಿರ ಇದೇ 12 ರಂದು ಕೋಲಾರದಲ್ಲಿ ನಡೆಯಲಿದೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಮಹದೇವ್ ಜೋಶಿ ಅವರು..

**ಧ್ವನಿ – ಮಹದೇವ್ ಜೋಶಿ– 33 ಸೆಕೆಂಡ್ಸ್**

*******

**ತುಮಕೂರು ಜಿಲ್ಲೆಯಲ್ಲಿ ಸಿಸೇರಿಯನ್ ಪ್ರಕರಣಗಳು** ಹೆಚ್ಚುತ್ತಿದ್ದು, ಶೇಕಡಾ 40ಕ್ಕಿಂತ ಹೆಚ್ಚಿನ ಪ್ರಕರಣಗಳು ದಾಖಲಾದರೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಎಚ್ಚರಿಕೆ ನೀಡಿದ್ದಾರೆ. ಜಿಲ್ಲಾಧಿಕಾರಿ

ಸಭಾಂಗಣದಲ್ಲಿ ನಡೆದ ತಾಯಿ ಮತ್ತು ಶಿಶು ಮರಣ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸಿಸೇರಿಯನ್ ಪ್ರಕರಣಗಳು ಹೆಚ್ಚಾದರೆ ಕೆಪಿಎಂಇ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗುವುದು, ವೈದ್ಯಾಧಿಕಾರಿಗಳು ಸಿಸೇರಿಯನ್ ಪ್ರಕರಣಗಳನ್ನು ಕಡಿಮೆ ಮಾಡಲು ಅಗತ್ಯ ಕ್ರಮ ವಹಿಸಬೇಕು ಎಂದು ಅವರು ಸೂಚಿಸಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ವಿಶ್ವ ಕ್ವಾಂಟಮ್** ಭೂಪಟದಲ್ಲಿ ಬೆಂಗಳೂರು: ಆರ್ಥಿಕ ನೆರವು ಕೋರಿ ಪ್ರಧಾನಿಗೆ ಮುಖ್ಯಮಂತ್ರಿ ಪತ್ರ.

**ರಾಜ್ಯದಲ್ಲಿ ಮೂರು ತಿಂಗಳ ಒಳಗಾಗಿ** ಖಾಲಿ ಇರುವ ಸ್ಥಳಗಳಲ್ಲಿ ಪಿಎಸ್ಐ ಹುದ್ದೆಗಳ ಭರ್ತಿ– ಗೃಹ ಸಚಿವರಿಂದ ವಿಧಾನಸಭೆಗೆ ಮಾಹಿತಿ.

**ಘಟಪ್ರಭಾ ಬಲದಂಡೆ ಮುಖ್ಯ** ಕಾಲುವೆಯಿಂದ 1,35,381 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ– ಉಪಮುಖ್ಯಮಂತ್ರಿ ಹೇಳಿಕೆ.

**ಹೊಸ ಕೈಗಾರಿಕಾ** ನೀತಿ ಮೂಲಕ ರಾಜ್ಯದ ಹಿಂದುಳಿದ ಪ್ರದೇಶಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ– ಕೈಗಾರಿಕಾ ಸಚಿವರ ಭರವಸೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******